ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ. ಮಲ್ಲೇಶ್ವರಂ. ಬೆಂಗಳೂರು

******************************************************************************

ಸಂಖ್ಯೆ: ಸಿಎಸ್1/SATS/ಮಾ ಮಾರ್ಚ್-2022/01/21-22 ದಿನಾಂಕ: 09-12-2021

**-ಸುತ್ತೋಲೆ -**

ವಿಷಯ: ಮಾರ್ಚ್-2022ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ವಿದ್ಯಾರ್ಥಿಗಳ ನೋಂದಣಿ ಮಾಹಿತಿಗಳನ್ನು ಮಂಡಳಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಅಪ್‌ಲೋಡ್ ಮಾಡುವ ಬಗ್ಗೆ.

ಉಲ್ಲೇಖ: ಎ-ಶಾಖೆಯ ಅಧಿಸೂಚನೆ ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ ಮಾರ್ಚ್ - 2022/39/2021-22 ದಿ: 07.12.2021

*******

ಮುಖ್ಯಶಿಕ್ಷಕರಿಗೆ ಮಂಡಳಿಯ ವತಿಯಿಂದ ಈಗಾಗಲೇ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಎಸ್.ಎಸ್.ಎಲ್.ಸಿ. ಮಾರ್ಚ್-2022ರ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ನೋಂದಣಿ ಮಾಹಿತಿಗಳನ್ನು ಮಂಡಳಿಯ ಜಾಲತಾಣದ (**https://sslc.karnataka.gov.in/**) ಶಾಲಾ ಲಾಗಿನ್‌ನಲ್ಲಿ ಪಡೆಯಲು ಯೋಜಿಸಲಾಗಿದೆ. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯ (ಶಾಲಾ ಅಭ್ಯರ್ಥಿ, ಖಾಸಗಿ ಅಭ್ಯರ್ಥಿ, ಪುನರಾವರ್ತಿತ ಶಾಲಾ ಹಾಗೂ ಖಾಸಗಿ ಅಭ್ಯರ್ಥಿಗಳು) ಮಾರ್ಚ್-2022ರ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳ ವಿವರಗಳನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವಂತೆ ಈ ಮೂಲಕ ಆದೇಶಿಸಿದೆ.

1) ಮಾಹಿತಿಗಳನ್ನು ಅಪ್‌ಲೋಡ್ ಮಾಡಲು ಬಳಸಬೇಕಾದ ಫಾರಂನ್ನು **https://sslc.karnataka.gov.in/** ಜಾಲತಾಣದ ಶಾಲಾ ಲಾಗಿನ್ ಮೂಲಕ ತಲುಪಬಹುದಾಗಿದೆ.
2) ಮುಖ್ಯಶಿಕ್ಷಕರಿಗೆ **ಮಂಡಳಿಯ ಶಾಲಾ ಲಾಗಿನ್‌ನಲ್ಲಿ** ಮಂಡಳಿಯ ವತಿಯಿಂದ ಈಗಾಗಲೇ ನೀಡಿರುವ **Username and Password** ಬಳಸಿ ಆನ್‌ಲೈನ್‌ನಲ್ಲಿ ನೋಂದಣಿ ಕಾರ್ಯ ಮಾಡಬಹುದಾಗಿದೆ. ಮಂಡಳಿಯ ವತಿಯಿಂದ ಮುಖ್ಯಶಿಕ್ಷಕರಿಗೆ ನೀಡಲಾಗಿರುವ **Username and Password**ನ್ನು ಗೌಪ್ಯವಾಗಿಟ್ಟುಕೊಳ್ಳುವುದು.
3) ಮಾರ್ಚ್-2022ರ ಪರೀಕ್ಷೆಗೆ ಈ ಕೆಳಕಂಡ ಅಭ್ಯರ್ಥಿಗಳನ್ನು ನೋಂದಾಯಿಸಬೇಕಾಗಿರುತ್ತದೆ.
   - ಶಾಲಾ ವಿದ್ಯಾರ್ಥಿಗಳ (CCERF)- ಪೂರ್ಣ ಮಾಹಿತಿ ಹಾಗೂ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಬೇಕು.
   - ಖಾಸಗಿ ವಿದ್ಯಾರ್ಥಿಗಳ (CCEPF) -ಪೂರ್ಣ ಮಾಹಿತಿ ಹಾಗೂ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಬೇಕು.
   - ಏಪ್ರಿಲ್ 2003 ರಿಂದ ಜೂನ್ 2010 ಹಾಗೂ ಜೂನ್-2019 ರಿಂದ ಸೆಪ್ಟೆಂಬರ್-2021 ರವರೆಗಿನ ಪುನರಾವರ್ತಿತ ಶಾಲಾ ಅಭ್ಯರ್ಥಿಗಳ ಹಾಗೂ ಪುನರಾವರ್ತಿತ ಖಾಸಗಿ ಅಭ್ಯರ್ಥಿಗಳು

(CCERR /CCEPR/NSR/NSPR) ನೋಂದಣಿ ಸಂಖ್ಯೆಯನ್ನು ನಮೂದಿಸಿದರೆ ಡೇಟಾ Auto Fetch ಆಗುತ್ತದೆ. ಪೋಷಕರ ಮೊಬೈಲ್ ಸಂಖ್ಯೆಯನ್ನು ನಮೂದಿಸಿ, ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಬೇಕು.

- **2002** ಮತ್ತು ಅದಕ್ಕಿಂತ ಹಿಂದಿನ ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅನುತ್ತೀರ್ಣರಾದ NSR ಮತ್ತು NSPR ಪುನರಾವರ್ತಿತ ಅಭ್ಯರ್ಥಿಗಳ ವಿವರಗಳನ್ನು ಶಾಲೆಯಲ್ಲಿ ಲಭ್ಯವಿರುವ ಎಂ.ಎಸ್.ಎ. ಫಾರಂ ಬಳಸಿ (ಶಾಲೆಯಲ್ಲಿ ಲಭ್ಯವಿಲ್ಲದಿದ್ದಲ್ಲಿ ಸಂಬಂಧಿಸಿದ ವಿಭಾಗೀಯ ಕಛೇರಿಯಿಂದ ದ್ವಿತೀಯ ಪ್ರತಿ ಎಂ.ಎಸ್.ಎ.ಯನ್ನು ಪಡೆದು) ಪರೀಕ್ಷಾ ಶುಲ್ಕವನ್ನು ಮಂಡಳಿಯ NEFT Challan ಮೂಲಕ ಪಾವತಿಸಿ ಮೂಲ ಚಲನ್ ಪ್ರತಿ, ಎಂ.ಎಸ್.ಎ. ಮತ್ತು ನಾಮಿನಲ್ ರೋಲ್‌ನೊಂದಿಗೆ ಮಂಡಳಿಗೆ ದಿನಾಂಕ 12–01–2022ರೊಳಗೆ ಸಲ್ಲಿಸುವುದು.

4) ದಿನಾಂಕ: 13-12-2021 ರಿಂದ 27-12-2021 ರವರೆಗೆ ಮಾಹಿತಿಯನ್ನು ಅಪ್‌ಲೋಡ್ ಮಾಡಲು ಕಾಲಾವಧಿಯನ್ನು ನಿಗದಿಪಡಿಸಲಾಗಿದೆ.

5) **ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಸಂಬಂಧಿಸಿದ ವಿದ್ಯಾರ್ಥಿಯ ಬಹುತೇಕ ಮಾಹಿತಿಗಳನ್ನು SATSನ ಡೇಟಾಬೇಸ್‌ನಿಂದ ಪಡೆಯುತ್ತಿರುವುದರಿಂದ ಈಗಿರುವ ಮಾಹಿತಿಗಳಲ್ಲಿ ಇರಬಹುದಾದ ತಪ್ಪುಗಳನ್ನು ಮೊದಲು SATSನ ಡೇಟಾಬೇಸ್‌ನಲ್ಲಿ ಸರಿಪಡಿಸಿ ನಂತರ ಪರೀಕ್ಷಾ ನೋಂದಣಿ ಫಾರಂ ಭರ್ತಿ ಮಾಡುವುದು.**

6) ಆನ್‌ಲೈನ್ ಡೇಟಾ ಎಂಟ್ರಿ ಪ್ರಾರಂಭಿಸುವ ಮೊದಲು ಶಾಲೆಯ ಪ್ರತಿ ವಿದ್ಯಾರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಭಾವಚಿತ್ರ (**60-80kb)** ಹಾಗೂ ಸಹಿಯನ್ನು **(20-50kb)** jpeg formatನಲ್ಲಿ ಅವರ ಎಸ್.ಎ.ಟಿ.ಎಸ್. ನೋಂದಣಿ ಸಂಖ್ಯೆಯ ಅನುಕ್ರಮದಲ್ಲಿ ಸೇವ್ ಮಾಡಿಟ್ಟುಕೊಳ್ಳುವುದು.

   ಉದಾ.ಗೆ ಸಹನಾ ಎಂಬ ವಿದ್ಯಾರ್ಥಿನಿಯ SATS ಸಂಖ್ಯೆಯು 012345678 ಆಗಿದ್ದಲ್ಲಿ ಭಾವಚಿತ್ರವನ್ನು ಸ್ಕ್ಯಾನ್ ಮಾಡಿ P-012345678 ಎಂದೂ, ಸಹಿಯನ್ನು ಸ್ಕ್ಯಾನ್ ಮಾಡಿ S-012345678 ಎಂದು ಸೇವ್ ಮಾಡಿಟ್ಟುಕೊಳ್ಳುವುದು.

7) ವಿದ್ಯಾರ್ಥಿಗಳ ಮಾಹಿತಿಗಳನ್ನು ಆನ್‌ಲೈನ್‌ನಲ್ಲಿ ನೋಂದಾಯಿಸಿದ ನಂತರ ಪ್ರತಿ ವಿದ್ಯಾರ್ಥಿಯ ಮಾಹಿತಿಗಳನ್ನು ವೈಯಕ್ತಿಕವಾಗಿ ಮತ್ತು ಶಾಲೆಯ ಕ್ರೋಢೀಕೃತ ಮಾಹಿತಿಯನ್ನು ನಾಮಿನಲ್ ರೋಲ್‌ನ್ನು ಮುದ್ರಿಸಿಕೊಂಡು ಪರಿಶೀಲಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

8) ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿರುವ ವಿದ್ಯಾರ್ಥಿಗಳ ಬ್ಯಾಂಕ್ ಖಾತೆ (ವಿದ್ಯಾರ್ಥಿಯ ಅಥವಾ ಪೋಷಕರ) ವಿವರಗಳನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ. ಹಿಂದುಳಿದ ವರ್ಗಕ್ಕೆ (OBC) ಸೇರಿದ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿ ಪಡೆಯಬೇಕಾದಲ್ಲಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ RD NUMBER ನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ.

9) ಉಲ್ಲೇಖದಲ್ಲಿ ಆದೇಶಿಸಿರುವಂತೆ ಹೊಸ ಖಾಸಗಿ ಅಭ್ಯರ್ಥಿಗಳ ನೋಂದಣಿ ಶುಲ್ಕವನ್ನು (ರೂ.205/–) ಶಾಲಾ ಹಂತದಲ್ಲಿಯೇ ಸಂಗ್ರಹಿಸಬೇಕಾಗಿರುವುದರಿಂದ, ಈ ಶುಲ್ಕವನ್ನೂ ಸಹ ಪರೀಕ್ಷಾ ಶುಲ್ಕದ ಜೊತೆಯಲ್ಲಿಯೇ ಆನ್‌ಲೈನ್‌ನಲ್ಲಿಯೇ ಮಂಡಳಿಗೆ ಭರಿಸಲು ಚಲನ್ ಸೃಜಿಸಲಾಗುವುದು.

10) ಮುಖ್ಯ ಪರೀಕ್ಷಾ ಶುಲ್ಕದ ಜೊತೆಗೆ ಉಲ್ಲೇಖಿತ ಅಧಿಸೂಚನೆಯಂತೆ ಪೂರ್ವಸಿದ್ಧತಾ ಪರೀಕ್ಷೆಯ ಶುಲ್ಕವನ್ನು ಸಹ ಸೇರ್ಪಡೆಗೊಳಿಸಿ ಚಲನ್ ಸೃಜಿಸಲಾಗುವುದು.

11) ಮುಖ್ಯ ಶಿಕ್ಷಕರು ಆನ್‌ಲೈನ್‌ನಲ್ಲಿ ಎಲ್ಲಾ ವಿದ್ಯಾರ್ಥಿಗಳ ಮಾಹಿತಿ ಗಣಕೀಕರಿಸಿದ ಮೇಲೆ ವಿದ್ಯಾರ್ಥಿಗಳ ಶುಲ್ಕವನ್ನು ಮಂಡಳಿಗೆ ಪಾವತಿಸಲು ನೋಂದಣಿಗೆ ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಮಂಡಳಿಯ ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್‌ನ್ನು ಬಳಸಿ **ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ (ಈ ಹಿಂದಿನ ಕಾರ್ಪೋರೇಷನ್ ಬ್ಯಾಂಕ್)** ರಾಜ್ಯದ ಯಾವುದೇ ಶಾಖೆಯಲ್ಲಿ ಪಾವತಿಸಿ, ಮೂಲ ಚಲನ್‌ನ್ನು ಮಂಡಳಿಗೆ ಸಲ್ಲಿಸುವುದು. **ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್‌ನ್ನು ಬಳಸಿಯೇ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆಫ್‌ಲೈನ್ ಚಲನ್ ಬಳಸಿ ಶುಲ್ಕ ಪಾವತಿಸಬಾರದು, ಪಾವತಿಸಿದಲ್ಲಿ ಅಂತಹ ಚಲನ್‌ನ್ನು ಪರಿಗಣಿಸಲಾಗುವುದಿಲ್ಲ.**

12) ಪ್ರಸ್ತುತ ಆನ್‌ಲೈನ್ ಮೂಲಕ ಭರ್ತಿ ಮಾಡಲಾದ ವಿದ್ಯಾರ್ಥಿಗಳ ವಿವರಗಳು ಅಂಕಪಟ್ಟಿ ಹಾಗೂ ವರ್ಗಾವಣೆ ಪತ್ರಗಳಲ್ಲಿ ನಮೂದಾಗುವುದರಿಂದ ಯಾವುದೇ ತಪ್ಪುಗಳು ಆಗದಂತೆ ಎಚ್ಚರಿಕೆ ವಹಿಸಲು ಸೂಚಿಸಿದೆ. ನಿಗದಿತ ದಿನಾಂಕದ ನಂತರ ತಾವುಗಳು ನೀಡುವ ಮಾಹಿತಿಗಳನ್ನು ಫ್ರೀಜ್ ಮಾಡುವುದರಿಂದ ಅದರ ನಂತರ ವಿದ್ಯಾರ್ಥಿಗಳ ವಿವರಗಳಲ್ಲಿ ಯಾವುದೇ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ.

13) ಸದರಿ ಪರೀಕ್ಷಾ ನೋಂದಣಿಗೆ ಸಂಬಂಧಿಸಿದಂತೆ ಯಾವುದೇ ಸಂದೇಹಗಳಿದ್ದಲ್ಲಿ ದಿನಾಂಕ **13-12-2021** ರಿಂದ **27-12-2021** ರವರೆಗೆ ಕಛೇರಿ ಕೆಲಸದ ದಿನಗಳಂದು ಮುಖ್ಯಶಿಕ್ಷಕರು ಮಂಡಳಿಯ ಸಹಾಯವಾಣಿಯ **080-23310075, 080-23310076** ಸಂಖ್ಯೆಗಳಿಗೆ ಕರೆ ಮಾಡಿ ಪರಿಹರಿಸಿಕೊಳ್ಳಬಹುದು.

(ಸುಮಂಗಲ. ವಿ)
ನಿರ್ದೇಶಕರು, (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ

ಪ್ರತಿಗಳನ್ನು :

1) ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು
2) ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
3) ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು
4) ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ
5) ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ
6) ನಿರ್ದೇಶಕರು, ಪ್ರೌಢ ಶಿಕ್ಷಣ, ಮಾನ್ಯ ಆಯುಕ್ತರ ಕಛೇರಿ
7) ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು, ಮೈಸೂರು, ಬೆಳಗಾಂ ಹಾಗೂ ಕಲಬುರಗಿ ವಿಭಾಗಗಳು
8)

ಇವರುಗಳಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.